ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಬುಧವಾರ, ದಿನಾಂಕ : 03 ನೇ ಫೆಬ್ರುವರಿ, 2021

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ನಿವೃತ್ತಿ ಅಧಿಕಾರಿಗಳನ್ನು ನೇಮಕ ಮಾಡಿಕೊಂಡಿರುವ ಬಗ್ಗೆ

ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

278 (349) ಮಾನ್ಯ ಮುಜರಾಯಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ದಿ: ದೇವರಾಜ್ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಲ್ಲಿ ಭ್ರಷ್ಟಾಚಾರಕ್ಕೆ ಆಸ್ಪದವಾಗುವಂತೆ ಸರ್ಕಾರದ ನೀತಿ ಹಾಗೂ ಸುತ್ತೋಲೆಗಳ ವಿರುದ್ಧವಾಗಿ ನಿವೃತ್ತಿಗೊಂಡ ಅಧಿಕಾರಿಗಳನ್ನು ಪುನರ್ ನೇಮಕ ಮಾಡಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ನಿವೃತ್ತಿ ಅಧಿಕಾರಿಗಳನ್ನು ವಜಾಗೊಳಿಸ¯ Áಗಿದೆಯೇ; ಹಾಗಿದ್ದಲ್ಲಿ, ಯಾವಾಗ ವಜಾಗೊಳಿಸಲಾಗಿದೆ ; (ಮಾಹಿತಿ ನೀಡುವುದು)

(ಇ) ಪುನರ್ ನೇಮಕಕ್ಕೆ ಕಾರಣೀಭೂತರಾದ ಅಧಿಕಾರಿಗಳ ವಿರುದ್ಧ ಸರ್ಕಾರವು ತೆಗೆದುಕೊಂಡ ಕ್ರಮಗಳೇನು ; ( ಮಾಹಿತಿ ನೀಡುವುದು)

(ಈ) ಇಂತಹವರ ವಿರುದ್ಧ ಎಷ್ಟು ದಿನಗಳಲ್ಲಿ ಹಾಗೂ ಯಾವ ರೀತಿ ಕ್ರಮ ಕೈಗೊಳ್ಳಲಾಗುತ್ತದೆ ? (ಸಂಪೂರ್ಣ ವಿವರ ನೀಡುವುದು)